ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : ~~29 (77)~~ 79(77)

ಸದಸ್ಯರ ಹೆಸರು : ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 01.02.2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ.	ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಕ್ಷೇತ್ರ ಸಮನ್ವಯಾಧಿಕಾರಿ ಇವರು ತಮ್ಮ ಕರ್ತವ್ಯ ಸಂದರ್ಭದಲ್ಲಿ ಸಾರ್ವಜನಿಕರಿಗೆ ತೀರಾ ಅನುಚಿತ ವರ್ತನೆ ತೋರುತ್ತಿರುವ ಬಗ್ಗೆ ಜೋಯಿಡಾ ತಾಲ್ಲೂಕಿನ ಎಲ್ಲಾ ಇಲಾಖೆಯ ಸರ್ಕಾರಿ ನೌಕರರು ಹಾಗೂ ಪತ್ರಿಕಾ ವರದಿಗಾರರು ಮತ್ತು ಸಾರ್ವಜನಿಕರು ಆಕ್ರೋಶ ವ್ಯಕ್ತ ಪಡಿಸಿ ಪ್ರತಿಭಟಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)	ಬಂದಿದೆ.
ಆ.	ಸದರಿ ಸಿಬ್ಬಂದಿ ಜೋಯಿಡಾ ತಾಲ್ಲೂಕಿನ ಶಿಕ್ಷಕರ ಸಿ.ಆರ್.ಪಿ/ಬಿ.ಆರ್.ಪಿಗಳ ಸಭೆಗಳಲ್ಲಿ ತೀರಾ ಕ್ಷುಲಕವಾಗಿ ಅವಹೇಳನಕಾರಿಯಾಗಿ ಮಾತನಾಡುವುದು ಹಾಗೂ ಯಾವುದೇ ಅಧಿಕಾರಿ ವರ್ಗದವರಿಗೆ ಗೌರವ ನೀಡದೆ ಬೇಜವಾಬ್ದಾರಿತನದಿಂದ ವರ್ತಿಸುವುದು, ಶಿಕ್ಷಕ ವೃಂದದವರಿಗೆ ಹಾಗೂ ಸಂಬಂಧಿಸಿದ ಸಿಬ್ಬಂದಿಗಳಿಗೆ ಅಸಂವಿಧಾನಿಕ ಪದಗಳನ್ನು ಬಳಸಿ ನಿಂದಿಸುವುದನ್ನು ತನಿಖೆ ಮಾಡಿ ಶಿಕ್ಷಕರ/ಸಾರ್ವಜನಿಕರ ಹಿತ ದೃಷ್ಟಿಯಿಂದ ಇವರನ್ನು ಕೂಡಲೇ ಜಿಲ್ಲೆಯಿಂದ ಬೇರೆಡೆಗೆ ವರ್ಗಾವಣೆ ಮಾಡುವುದಲ್ಲದೆ ಅವರ ಅವಧಿಯಲ್ಲಿನ ಲಕ್ಷಾಂತರ ರೂಪಾಯಿಯ ಅವ್ಯವಹಾರದ ತನಿಖೆ ಮಾಡಲಾಗುವುದೇ? (ವಿವರ ನೀಡುವುದು)	ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಶಿರಸಿ (ಶೈಕ್ಷಣಿಕ ಜಿಲ್ಲೆ) ಇವರ ದಿನಾಂಕ:28/01/2021ರಂದು ನೀಡಿರುವ ವರದಿಯ ಪ್ರಕಾರ ಶ್ರೀ ಅಬ್ದುಲ್ ರೆಹಮಾನ, ಕ್ಷೇತ್ರ ಸಮನ್ವಯಾಧಿಕಾರಿ ಕ್ಷೇತ್ರ ಸಂಪನ್ಮೂಲ ಕೇಂದ್ರ ಜೊಯಿಡಾ ಇವರ ವಿರುದ್ಧ ಮಾಡಲಾದ ಆರೋಪಗಳಲ್ಲಿ ಜೊಯಿಡಾ ತಾಲ್ಲೂಕಿನ ಶಿಕ್ಷಕರ ಸಂಘದವರು ನೀಡಲಾದ ದೂರಿನ ಪ್ರಕಾರ ಸದರಿ ಅಧಿಕಾರಿಯ ಕರ್ತವ್ಯದ ವೇಳೆಯಲ್ಲಿ ಶಿಕ್ಷಕರ / ಸಿಬ್ಬಂದಿಗಳ ಜೊತೆಗೆ ಅನುಚಿತವಾಗಿ ವರ್ತಿಸುವುದು ಹಾಗೂ ಚುನಾವಣೆ ಸಂದರ್ಭದಲ್ಲಿ ನೀತಿ ಸಂಹಿತೆ ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿರತ್ತದೆ. ಈ ಸಂಬಂಧ ಸದರಿ ನೌಕರರಿಗೆ ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಶಿರಸಿ ಇವರು ದಿನಾಂಕ:06/10/2020ರಂದು ನೋಟಿಸ್ಸು ನೀಡಿದ್ದು, ಈ ತನಕ ಯಾವುದೇ ರೀತಿ ಲಿಖಿತ ಹೇಳಿಕೆ ನೀಡಿರುವುದಿಲ್ಲ. ಅಲ್ಲದೆ ಸರ್ಕಾರದ ಹಣ ರೂ.79974/-ಗಳನ್ನು ದುರುಪಯೋಗ ಮಾಡಿರುವುದು ತಪಾಸಣೆ ವೇಳೆಯಲ್ಲಿ ಕಂಡುಬಂದಿದ್ದು, ಮರುಭರಣ ಮಾಡಿರುವುದಿಲ್ಲ, ಈ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಸೂಕ್ತ ಶಿಸ್ತು ಕ್ರಮ ಜರುಗಿಸಲು ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರಿಗೆ ವರದಿ ಸಲ್ಲಿಸಿದ್ದು, ಕೂಡಲೇ ಶಿಸ್ತು ಕ್ರಮ ಜರುಗಿಸಲಾಗುವದು.

ಸಂಖ್ಯೆ: ಇಪಿ 19 ಎಸ್‌ಎಲ್‌ಬಿ 2021

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು